**All India Radio: Bangalore**
**National Bulletin In Kannada**
**29.05.2025 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**29.05.2025 / 7.35 am**

**<><*<><>*><>**

## ಮುಖ್ಯಾಂಶಗಳು

೧. ಸಿಕ್ಕಿಂ, ಪಶ್ಚಿಮ ಬಂಗಾಳ, ಬಿಹಾರ ಮತ್ತು ಉತ್ತರ ಪ್ರದೇಶಕ್ಕೆ ಇಂದಿನಿಂದ ಎರಡು ದಿನಗಳ ಕಾಲ ಪ್ರಧಾನಿ ನರೇಂದ್ರ ಮೋದಿ ಪ್ರವಾಸ

೨. ಕೃಷಿ ವಲಯಕ್ಕೆ ಹೆಚ್ಚಿನ ಆದ್ಯತೆ ನೀಡಲು ಒಡಿಶಾದ ಪುರಿಯಲ್ಲಿ ಮಹತ್ವಾಕಾಂಕ್ಷೆಯ ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಇಂದು ಚಾಲನೆ

೩. ರೈತರ ಉತ್ಪನ್ನಗಳಿಗೆ ಲಾಭದಾಯಕ ಬೆಲೆ ನೀಡಲು ಹದಿನಾಲ್ಕು ಖಾರೀಫ್ ಬೆಳೆಗಳಿಗೆ ಕನಿಷ್ಟ ಬೆಂಬಲ ಬೆಲೆ ಹೆಚ್ಚಿಸಿದ ಕೇಂದ್ರ ಸರ್ಕಾರ

೪. ಪಾಕಿಸ್ತಾನದ ಗಡಿ ಜಿಲ್ಲೆಗಳಲ್ಲಿ ಇಂದು ನಾಗರಿಕ ರಕ್ಷಣಾ ಅಣಕು ಕವಾಯತು ನಡೆಸಲು ಸಕಲ ಸಿದ್ಧತೆ

೫. ಐಪಿಎಲ್ ಟಿ-೨೦ ಕ್ರಿಕೆಟ್ ಇಂದಿನಿಂದ ಪ್ಲೇ ಆಫ್ ಪಂದ್ಯಗಳು ಆರಂಭ

*****************

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದಿನಿಂದ ಎರಡು ದಿನಗಳ ಕಾಲ ಸಿಕ್ಕಿಂ, ಪಶ್ಚಿಮ ಬಂಗಾಳ, ಬಿಹಾರ ಮತ್ತು ಉತ್ತರಪ್ರದೇಶಗಳಲ್ಲಿ ಪ್ರವಾಸ ಮಾಡಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಅವರು ೭೦ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳ ಉದ್ಘಾಟನೆ, ಲೋಕಾರ್ಪಣೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಸಿಕ್ಕಿಂ ಭೇಟಿ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು, ಸಿಕ್ಕಿಂ ರಾಜ್ಯದ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ಭಾಗಿಯಾಗಲಿದ್ದು, ವಿವಿಧ ಪ್ರಗತಿಪರ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಬಳಿಕ ಪಶ್ಚಿಮ ಬಂಗಾಳಕ್ಕೆ ತೆರಳಲಿರುವ ಅವರು, ಅಲಿಪುರ್‌ದ್ವಾರ್ ಅನಿಲ ವಿತರಣಾ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ನಂತರ ಬಿಹಾರ ಮತ್ತು ಉತ್ತರಪ್ರದೇಶಗಳಿಗೂ ಪ್ರವಾಸ ಮುಂದುವರೆಸಲಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಎರಡೂ ರಾಜ್ಯಗಳಲ್ಲಿ, ಬಹು ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿ, ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ.

*****************

ಕೃಷಿ ವಲಯಕ್ಕೆ ಹೆಚ್ಚಿನ ಆದ್ಯತೆ ನೀಡುವುದರ ಜೊತೆಗೆ ರೈತರ ಆದಾಯ ದ್ವಿಗುಣಗೊಳಿಸಬೇಕೆಂಬ ಮಹತ್ವಾಕಾಂಕ್ಷೆಯಿಂದ ದೇಶಾದ್ಯಂತ ಇಂದಿನಿಂದ 'ವಿಕಸಿತ ಕೃಷಿ ಸಂಕಲ್ಪ' ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.ಒಡಿಶಾದ ಪುರಿಯಲ್ಲಿ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ.ದೇಶದ ೭೦೦ ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಈ ಅಭಿಯಾನ ನಡೆಯಲಿದ್ದು, ಜೂನ್ ೧೨ರವರೆಗೆ ಮುಂದುವರಿಯಲಿದೆ. ಅಭಿಯಾನದ ಸಂದರ್ಭದಲ್ಲಿ ಕೇಂದ್ರ ಸಚಿವರು, ಸುಮಾರು ೨೦ ರಾಜ್ಯಗಳಿಗೆ ಭೇಟಿ ನೀಡಲಿದ್ದು, ರೈತರು, ವಿಜ್ಞಾನಿಗಳೊಂದಿಗೆ ನೇರ ಸಂವಾದದಲ್ಲಿ ತೊಡಗುವಂತೆ ಪ್ರೇರೇಪಿಸಲಿದ್ದಾರೆ ಎಂದು ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.ಕರ್ನಾಟಕ ಸೇರಿದಂತೆ ತಮಿಳುನಾಡು, ತೆಲಂಗಾಣ, ಆಂಧ್ರಪ್ರದೇಶ, ಜಮ್ಮು, ರಾಜಸ್ಥಾನ, ಗುಜರಾತ್, ಉತ್ತರ ಪ್ರದೇಶ, ಬಿಹಾರ, ಮಹಾರಾಷ್ಟ್ರ, ಹರಿಯಾಣ, ಪಂಜಾಬ್, ಉತ್ತರಾಖಂಡ್, ಅಸ್ಸಾಂ, ಮೇಘಾಲಯ, ಮಧ್ಯಪ್ರದೇಶ, ದೆಹಲಿ ಮತ್ತು ಛತ್ತೀಸ್ ಗಢ ರಾಜ್ಯಗಳಲ್ಲಿ ಸಚಿವರು ಪ್ರವಾಸ ಕೈಗೊಳ್ಳಲಿದ್ದಾರೆ.

*****************

ಆರ್ಥಿಕ ವ್ಯವಹಾರಗಳ ಕುರಿತಾದ ಸಂಪುಟ ಸಮಿತಿಯು ೨೦೨೫-೨೬ರ ಪ್ರಸಕ್ತ ಸಾಲಿನ ಮಾರುಕಟ್ಟೆಯಲ್ಲಿ  ಹದಿನಾಲ್ಕು ಖಾರಿಫ್ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಹೆಚ್ಚಳಕ್ಕೆ ಅನುಮೋದನೆ ನೀಡಿದೆ.ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ರೈತರಿಗೆ ಅವರ ಉತ್ಪನ್ನಗಳಿಗೆ ಲಾಭದಾಯಕ ಬೆಲೆಗಳನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ೨೦೨೫-೨೬ರ ಸಾಲಿನ ಮಾರುಕಟ್ಟೆಯಲ್ಲಿ  ಖಾರಿಫ್ ಬೆಳೆಗಳ ಕನಿಷ್ಠ ಬೆಂಬಲ ಬೆಲೆ ಅನ್ನು ಹೆಚ್ಚಿಸಿದೆ ಎಂದು ಹೇಳಿದ್ದಾರೆ.ಕೇಂದ್ರ ಸಚಿವ ಸಂಪುಟವು ೨೦೨೫-೨೬ರ ಹಣಕಾಸು ವರ್ಷಕ್ಕೆ ಮಾರ್ಪಡಿಸಿದ ಬಡ್ಡಿ ಸಹಾಯಧನ ಯೋಜನೆಯನ್ನು ಅಸ್ತಿತ್ವದಲ್ಲಿರುವ ಶೇಕಡಾ ೧.೫ ರಷ್ಟು ಬಡ್ಡಿ ಸಹಾಯಧನದೊಂದಿಗೆ ಮುಂದುವರಿಸಲು ಅನುಮೋದನೆ ನೀಡಿದೆ.ಮಹಾರಾಷ್ಟ್ರ ಮತ್ತು ಮಧ್ಯಪ್ರದೇಶದಲ್ಲಿ ಭಾರತೀಯ ರೈಲ್ವೆಯಾದ್ಯಂತ ಎರಡು ಮಲ್ಟಿಟ್ರ್ಯಾಕ್ ಯೋಜನೆಗಳಿಗೆ ಸಂಪುಟ ಅನುಮೋದನೆ ನೀಡಿದೆ.

*****************

ಪಾಕಿಸ್ತಾನದ ಗಡಿಯಲ್ಲಿರುವ ಜಿಲ್ಲೆಗಳಲ್ಲಿ ಇಂದು ನಾಗರಿಕ ರಕ್ಷಣಾ ಅಣಕು ಕವಾಯತು ನಡೆಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಗುಜರಾತ್, ರಾಜಸ್ಥಾನ, ಪಂಜಾಬ್ ಮತ್ತು ಜಮ್ಮು ಮತ್ತು ಕಾಶ್ಮೀರದಲ್ಲಿ ಈ ಅಣಕು ಕವಾಯತು ನಡೆಯಲಿದೆ. ಅಭ್ಯಾಸದಲ್ಲಿ ಭಾಗವಹಿಸುವವರಿಗೆ ಅಧಿಕಾರಿಗಳು ತುರ್ತು ಪರಿಸ್ಥಿತಿಗಳನ್ನು ಎದುರಿಸಲು ಅಗತ್ಯವಿರುವ ಕೌಶಲ್ಯಗಳನ್ನು ಕಲಿಸಲು ಪ್ರಾತ್ಯಕ್ಷಿಕೆಗಳು ಮತ್ತು ತರಬೇತಿ ಅಧಿವೇಶನಗಳನ್ನು ನಡೆಸಲಿದ್ದಾರೆ. ವಿವಿಧ ಧಾರ್ಮಿಕ ಸಂಸ್ಥೆಗಳು, ಸರಕಾರಿ ಇಲಾಖೆಗಳು, ಎನ್‌ಸಿಸಿ ಕ್ಯಾಡೆಟ್‌ಗಳು ಮತ್ತು ಎನ್‌ಎಸ್‌ಎಸ್ ಸ್ವಯಂಸೇವಕರು ಈ ಅಭ್ಯಾಸದಲ್ಲಿ ಭಾಗವಹಿಸಲಿದ್ದಾರೆ.

*****************

ಭಾರತದ ಸಿಂಧೂರ ಕಾರ್ಯಾಚರಣೆಯ ರಾಜತಾಂತ್ರಿಕ ಸಂಪರ್ಕದ ಭಾಗವಾಗಿ ಬಿಜೆಪಿ ಸಂಸದ ರವಿಶಂಕರ್ ಪ್ರಸಾದ್ ನೇತೃತ್ವದ ಒಂಭತ್ತು ಸದಸ್ಯರ ಸಂಸದೀಯ ನಿಯೋಗವು ಇಟಲಿಯ ರಾಜತಾಂತ್ರಿಕ ಸಂಪರ್ಕ ಭೇಟಿಯನ್ನು ಮುಗಿಸಿ ಇಂದು ಡೆನ್ಮಾರ್ಕ್‌ಗೆ ತೆರಳಲಿದೆ. ಇಟಲಿಯಲ್ಲಿ ತಂಡವು ಭಯೋತ್ಪಾದನೆಯನ್ನು ಎದುರಿಸುವಲ್ಲಿ ಭಾರತದ ಅಚಲ ಬದ್ಧತೆಯನ್ನು ಒತ್ತಿ ಹೇಳಿದೆ. ಜಾಗತಿಕ ಭಯೋತ್ಪಾದನ ಸವಾಲುಗಳ ಕುರಿತು ದೇಶದ ನಿಲುವನ್ನು ಹಂಚಿಕೊಳ್ಳಲು ನಿಯೋಗವು ಡ್ಯಾನಿಶ್ ಸಂಸದರು, ರಾಜಕೀಯ ಪಕ್ಷಗಳು, ಮಾಧ್ಯಮ ಸದಸ್ಯರು ಮತ್ತು ಭಾರತೀಯ ವಲಸಿಗರೊಂದಿಗೆ ಡೆನ್ಮಾರ್ಕ್‌ನಲ್ಲಿ ಸಂವಹನ ನಡೆಸಲಿದೆ. ಮತ್ತೊಂದೆಡೆ ಬಿಜೆಪಿ ಸಂಸದ ಬೈಜಯಂತ್ ಜೇಪಾಂಡಾ ನೇತೃತ್ವದ ಸರ್ವಪಕ್ಷ ನಿಯೋಗವು ಸೌಧಿ ಅರೇಬಿಯಾದಲ್ಲಿ ಪ್ರಿನ್ಸ್ ಸೌದ್ ಅಲ್ ಫೈಸಲ್ ಇನ್‌ಸ್ಟಿಟ್ಯೂಟ್ ಆಫ್ ಡಿಪ್ಲೋಮಾಟಿಕ್ ಸ್ಟಡೀಸ್ ನ ಮಹಾ ನಿರ್ದೇಶಕ ಮುಷಬಾಬ್ ಅಲ್-ಕಹ್ತಾನಿ ಅವರನ್ನು ಭೇಟಿ ಮಾಡಿ ಚರ್ಚಿಸಿತು.

*****************

ಏಪ್ರಿಲ್ ೨೨ ರಂದು ನಡೆದ ಭೀಕರ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿಂದಿನ ಅಪರಾಧಿಗಳನ್ನು ಗುರುತಿಸಿ, ಪತ್ತೆಹಚ್ಚಿ ಮತ್ತು ಶಿಕ್ಷಿಸಿದ್ದಕ್ಕಾಗಿ ರಷ್ಯಾದ ರಾಯಭಾರಿ ಡೆನಿಸ್ ಅಲಿಪೋವ್ ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವವನ್ನು ಶ್ಲಾಘಿಸಿದ್ದಾರೆ. ಭಾರತ ಮತ್ತು ರಷ್ಯಾ ಎರಡೂ ಬಹು-ಧ್ರುವೀಯ ವಿಶ್ವ ಕ್ರಮವನ್ನು ಬೆಂಬಲಿಸುತ್ತವೆ ಎಂದು ಅವರು ಪ್ರತಿಪಾದಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ಆಹ್ವಾನದ ಮೇರೆಗೆ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಈ ವರ್ಷ ಭಾರತಕ್ಕೆ ಭೇಟಿ ನೀಡುವ ನಿರೀಕ್ಷೆಯಿದೆ ಎಂದು ಕ್ರೆಮ್ಲಿನ್ ದೃಢಪಡಿಸಿದೆ. ಇಬ್ಬರು ನಾಯಕರ ನಡುವಿನ ವಾರ್ಷಿಕ ಸಭೆಗಳಿಗೆ ನಡೆಯುತ್ತಿರುವ ಬದ್ಧತೆಯ ಭಾಗವಾಗಿ ಈ ಭೇಟಿಯನ್ನು ಯೋಜಿಸಲಾಗುತ್ತಿದೆ. ಏತನ್ಮಧ್ಯೆ, ಈ ತಿಂಗಳ ಆರಂಭದಲ್ಲಿ, ಪುಟಿನ್ ಪ್ರಧಾನಿ ಮೋದಿ ಅವರಿಗೆ ಕರೆ ಮಾಡಿ ಏಪ್ರಿಲ್ ೨೨ ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು "ಬಲವಾಗಿ ಖಂಡಿಸಿದರು", ಭಯೋತ್ಪಾದನೆ ವಿರುದ್ಧ ನಡೆಯುತ್ತಿರುವ ಹೋರಾಟದಲ್ಲಿ ಭಾರತಕ್ಕೆ ಸಂಪೂರ್ಣ ಬೆಂಬಲವನ್ನು ನೀಡಿದರು.

*****************

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ರಾಷ್ಟ್ರಪತಿ ಭವನದ ಸಾಂಸ್ಕೃತಿಕ ಕೇಂದ್ರದಲ್ಲಿ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಎರಡು ದಿನಗಳ ಸಮ್ಮೇಳನದಲ್ಲಿ ಕವಿಗಳ ಸಭೆ, ಭಾರತದ ಸ್ತ್ರೀವಾದಿ ಸಾಹಿತ್ಯ, ಸಾಹಿತ್ಯದಲ್ಲಿ ಬದಲಾವಣೆ ೧/s ಬದಲಾವಣೆಯ ಸಾಹಿತ್ಯ ಮತ್ತು ಜಾಗತಿಕ ದೃಷ್ಟಿಕೋನದಲ್ಲಿ ಭಾರತೀಯ ಸಾಹಿತ್ಯದ ಹೊಸ ನಿರ್ದೇಶನಗಳು ಸೇರಿದಂತೆ ವಿವಿಧ ಅಧಿವೇಶನಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಈ ಸಮ್ಮೇಳನವು ದೇವಿ ಅಹಲ್ಯಾಬಾಯಿ ಹೋಳ್ಕರ್ ಅವರ ಕಥೆಯೊಂದಿಗೆ ಮುಕ್ತಾಯಗೊಳ್ಳಲಿದೆ. ಸಾಹಿತ್ಯ ಅಕಾಡೆಮಿಯ ಸಹಯೋಗದೊಂದಿಗೆ ರಾಷ್ಟ್ರಪತಿ ಭವನವು ಎರಡು ದಿನಗಳ ಈ ಸಮ್ಮೇಳನವನ್ನು ಆಯೋಜಿಸಲಿದೆ.

*****************

ಪ್ರಧಾನಿ ನರೇಂದ್ರ ಮೋದಿ ಅವರ ೧೧ ವರ್ಷಗಳ ಅಧಿಕಾರಾವಧಿಯನ್ನು ಸ್ಮರಿಸಲು ಬಿಜೆಪಿ 'ಮೋದಿ ಸರ್ಕಾರದ ೧೧ ವರ್ಷಗಳು - ಸಂಕಲ್ಪ ಸೇ ಸಿದ್ಧಿ' ಎಂಬ ಮಹತ್ವಾಕಾಂಕ್ಷೆಯ ರಾಷ್ಟ್ರವ್ಯಾಪಿ ಪ್ರಚಾರ ಅಭಿಯಾನವನ್ನು ಅನಾವರಣಗೊಳಿಸಿದೆ. ಪ್ರಮುಖ ಆಡಳಿತದ ಮೈಲಿಗಲ್ಲುಗಳನ್ನು ಆಚರಿಸುವ ಮತ್ತು ವಿಕಸಿತ ಭಾರತದ ದೃಷ್ಟಿಕೋನವನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಈ ಉಪಕ್ರಮವನ್ನು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅರುಣ್ ಸಿಂಗ್ ಅಧಿಕೃತ ಸುತ್ತೋಲೆಯ ಮೂಲಕ ಘೋಷಿಸಿದ್ದಾರೆ.ಈ ಅಭಿಯಾನವು ಆಪರೇಷನ್ ಸಿಂಧೂರ್‌ನ ಇತ್ತೀಚಿನ ಯಶಸ್ಸನ್ನು ಸಹ ಎತ್ತಿ ತೋರಿಸುತ್ತದೆ, ಪ್ರಧಾನ ಮಂತ್ರಿ ಅವರು, "ಆಪರೇಷನ್ ಸಿಂಧೂರ್ ಸಮಯದಲ್ಲಿ ನಮ್ಮ ಪಡೆಗಳು ಪ್ರದರ್ಶಿಸಿದ ಶೌರ್ಯ ಮತ್ತು ಧೈರ್ಯವು ಪ್ರತಿಯೊಬ್ಬ ಭಾರತೀಯನನ್ನು ಹೆಮ್ಮೆಪಡುವಂತೆ ಮಾಡಿದೆ. ಗಡಿಯುದ್ದಕ್ಕೂ ಶತ್ರು ಭಯೋತ್ಪಾದಕ ಶಿಬಿರಗಳಿಗೆ ಹೆಚ್ಚಿನ ನಿಖರತೆಯೊಂದಿಗೆ ಮಾಡಿದ ನಾಶವು ಮನಸ್ಸಿಗೆ ಮುದ ನೀಡುವಂತಿತ್ತು. ಭಯೋತ್ಪಾದನೆಯ ವಿರುದ್ಧ ಹೋರಾಡಲು ಆಪರೇಷನ್ ಸಿಂಧೂರ್ ಜಾಗತಿಕವಾಗಿ ಹೊಸ ಮಾದರಿಯನ್ನು ನೀಡಿದೆ." ಎಂದು ಹೇಳಿದ್ದಾರೆ.

*****************

ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್‌ನಲ್ಲಿ ಇಂದು ಪ್ಲೇ-ಆಫ್ ಪಂದ್ಯಗಳು ಆರಂಭವಾಗಲಿವೆ. ಪಾಯಿಂಟ್ಸ್ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವ ಪಂಜಾಬ್ ಕಿಂಗ್ಸ್ ತಂಡವು ಇಂದು ಸಂಜೆ ಮುಲ್ಲನ್‌ಪುರದಲ್ಲಿ ನಡೆಯುವ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಎರಡನೇ ಸ್ಥಾನದಲ್ಲಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭:೩೦ ಕ್ಕೆ ಆರಂಭವಾಗಲಿದೆ. ಮೊದಲ ಕ್ವಾಲಿಫೈಯರ್ ನಂತರ, ಎಲ್ಲರ ಕಣ್ಣುಗಳು ಎಲಿಮಿನೇಟರ್ ಮೇಲೆ ಇರಲಿವೆ. ಈ ಪಂದ್ಯದಲ್ಲಿ, ನಾಳೆ ಮೂರನೇ ಸ್ಥಾನದಲ್ಲಿರುವ ಗುಜರಾತ್ ಟೈಟಾನ್ಸ್ ನಾಲ್ಕನೇ ಸ್ಥಾನದಲ್ಲಿರುವ ಮುಂಬೈ ಇಂಡಿಯನ್ಸ್ ತಂಡವನ್ನು ಎದುರಿಸಲಿದೆ. ಎಲಿಮಿನೇಟರ್‌ನ ವಿಜೇತ ತಂಡವು ಜೂನ್ ೧ ರಂದು ಎರಡನೇ ಕ್ವಾಲಿಫೈಯರ್‌ನಲ್ಲಿ ಮೊದಲ ಕ್ವಾಲಿಫೈಯರ್ ಸೋತ ತಂಡವನ್ನು ಎದುರಿಸಲಿದೆ. ಎರಡನೇ ಕ್ವಾಲಿಫೈಯರ್‌ನ ವಿಜೇತ ತಂಡವು ಜೂನ್ ೩ ರಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುವ ಫೈನಲ್‌ನಲ್ಲಿ ಮೊದಲ ಕ್ವಾಲಿಫೈಯರ್‌ನ ವಿಜೇತ ತಂಡವನ್ನು ಎದುರಿಸಲಿದೆ.

*******ನಮ್ಮ ಮುಂದಿನ ವಾರ್ತಾಪ್ರಸಾರ ೧೨ ಗಂಟೆಗೆ*******